ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಇತರೆ ರಾಜ್ಯಗಳ ಮಾಹಿತಿ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ

ದಿನಾಂಕ : DATE : 22/01/20.

## ವಿಧೇಯಕ ಮಂಡನೆ

**ಅಮರಾವತಿ:** ಆಂಧ್ರಪ್ರದೇಶಕ್ಕೆ 3 ರಾಜಧಾನಿಗಳನ್ನು ಹೊಂದುವುದಕ್ಕಾಗಿ ಇರುವ ವಿಧೇಯಕವನ್ನು ಬರೋಬ್ಬರಿ ಎಂಟು ಗಂಟೆಗಳ ಪ್ರತಿಭಟನೆಗಳ ಬಳಿಕ ಮಂಗಳವಾರ ವಿಧಾನಸಭೆಯಲ್ಲಿ ಮಂಡಿಸಲಾಗಿದೆ. ಮುಖ್ಯಮಂತ್ರಿ ವೈ.ಎಸ್. ಜಗನ್ಮೋಹನ ರೆಡ್ಡಿ ನೇತೃತ್ವದ ಸರ್ಕಾರ ನಿರ್ಧಾರದ ವಿರುದ್ಧ ತೆಲುಗು ದೇಶಂ ಪಕ್ಷದ ಶಾಸಕರು, ಸಂಸದರು ಪ್ರತಿಭಟನೆ ನಡೆಸಿದ್ದಾರೆ. ಸಂಸದ ಜಯದೇವ್ ಗಲ್ಲಾ ಅವರನ್ನು ಪೊಲೀಸರು ದಸ್ತಗಿರಿ ಮಾಡಿದ್ದು ಅವರ ವಿರುದ್ಧ ಕೇಸು ದಾಖಲಿಸಿದ್ದಾರೆ. ರಾಜ್ಯ ವಿವಿಧ ಭಾಗಗಳಲ್ಲಿ ರಾಜಧಾನಿ ವಿಭಜನೆ ವಿಧೇಯಕ ಖಂಡಿಸಿ ದಾಂಧಲೆಗಳು ನಡೆದಿವೆ. ವಿಶೇಷವಾಗಿ ಅಮರಾವತಿಯಲ್ಲಿ ರೈತರು, ಮಹಿಳೆಯರು ಮತ್ತು ಇತರರು ಧರಣಿ ನಡೆಸಿದ್ದಾರೆ. ನಿಷೇಧಾಜ್ಞೆ ಉಲ್ಲಂಘಿಸಿ ವಿಧಾನಸೌಧದತ್ತ ನುಗ್ಗಲು ಯತ್ನಿಸಿದಾಗ ಅವರನ್ನು ಬಂಧಿಸಲಾಗಿದೆ.